2294(2049) ಶ್ರೀ ಹಾಲಪ್ಪ ಹೆಚ್. (ಹೊಸನಗರ):- ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ತಾಲ್ಲೂಕು ಕುಂಸಿ, ಅಗರ, ಬಾಳೆಕೊಪ್ಪ ಮತ್ತು ಮರಸ ಗ್ರಾಮದ ಕೆರೆಗಳಿಗೆ ನೀರೊದಗಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಈ ವರ್ಷದಲ್ಲಿ ಪ್ರಾರಂಭಿಸಲಾಗುವುದೇ;

ಇ) ಇದಕ್ಕೆ ತಗಲುವ ವೆಚ್ಚವೆಷ್ಟು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

2295 (2050) ಶ್ರೀ ಹಾಲಪ್ಪ ಹೆಚ್. (ಹೊಸನಗರ):- ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊಸನಗರ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆವಿಗೂ ಮಂಜೂರಾದ ಏತ ನೀರಾವರಿ ಯೋಜನೆಗಳು ಯಾವುವು?

ಆ) ಇವುಗಳಲ್ಲಿ ಅಪೂರ್ಣಗೊಂಡ ಯೋಜನೆಗಳೆಷ್ಟು?

ಇ) ಇವುಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

ಈ) ಇವುಗಳನ್ನು ಪೂರ್ಣಗೊಳಿಸಲು ಬೇಕಾದ ಅಂದಾಜು ಮೊತ್ತವೆಷ್ಟು?

ಉ) ಈ ಯೋಜನೆಗೆ ಈ ಸಾಲಿನಲ್ಲಿ ಬಿಡುಗಡೆಯಾದ ಹಣವೆಷ್ಟು;

ಊ) ಹಣ ಬಿಡುಗಡೆ ಮಾಡದಿದ್ದಲ್ಲಿ ಕಾರಣಗಳೇನು?

ಋ) ಅಪೂರ್ಣಗೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾದ ಮೊತ್ತವನ್ನು ಬಿಡುಗಡೆ ಮಡಲು ಸರ್ಕಾರ ಕ್ರಮ ಕೈಗೊಳ್ಳುವುದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ತುಂಗಾ ಏತ ನೀರಾವರಿ ಯೋಜನೆಯು ಕರ್ನಾಟಕ ನೀರಾವರಿ ನಿಗಮದ ವತಿಯಿಂದ ಮತ್ತು ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಮಂಜೂರಾದ ಈ ಕೆಳಕಂಡ ಏತ ನೀರಾವರಿ ಯೋಜನೆಗಳು ಹೊಸನಗರ ಕ್ಷೇತ್ರ ವ್ಯಾಪ್ತಿಯಲ್ಲಿ ಇರುತ್ತದೆ.

1) ಶೆಟ್ಟಿಕೆರೆ ವಡೇರಕೊಪ್ಪ ಏತ ನೀರಾವರಿ ಯೋಜನೆ.

2) ದೊಡ್ಡಮಟ್ಟಿ ಏತ ನೀರಾವರಿ ಯೋಜನೆ.

3) ಹೊಳಲೂರು ಏತ ನೀರಾವರಿ ಯೋಜನೆ

ಆ) ತುಂಗಾ ಏತ ನೀರಾವರಿ ಯೋಜನೆ ಮತ್ತು ದೊಡ್ಡಮಟ್ಟಿ ಏತ ನೀರಾವರಿ ಯೋಜನೆಗಳು.